ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ
KARNATAKA LEGISLATIVE ASSEMBLY RESEARCH AND REFERENCE BRANCH

ಪತ್ರಿಕಾ ತುಣುಕುಗಳು
PAPER CLIPPINGS

ಇಲಾಖೆ / ವಿಷಯ: DEPARTMENT / SUBJECT: ಸಂತಾಪ

ಪತ್ರಿಕೆಯ ಹೆಸರು : NAME OF THE NEWS PAPER : ವಿಜಯ ಕರ್ನಾಟಕ ದಿನಾಂಕ : DATE : 28/8/19

# ಮಾಜಿ ಸಚಿವ ಎ.ಕೆ. ಸುಬ್ಬಯ್ಯ ಇನ್ನಿಲ್ಲ

**ಬೆಂಗಳೂರು:** ಹಿರಿಯ ರಾಜಕಾರಣಿ, ಮಾಜಿ ಸಚಿವ, ವಕೀಲ ಎ.ಕೆ.ಸುಬ್ಬಯ್ಯ (85) ಮಂಗಳವಾರ ಬೆಂಗಳೂರಿನಲ್ಲಿ ನಿಧನರಾದರು.



ಒಂದು ವರ್ಷದಿಂದ ತೀವ್ರ ಅನಾರೋಗ್ಯದಿಂದ ಬಳಲುತ್ತಿದ್ದ ಅವರನ್ನು ನಗರದ ಮಣಿಪಾಲ್ ಆಸ್ಪತ್ರೆಗೆ ದಾಖಲಿಸಲಾಗಿತ್ತು. ಅಲ್ಲಿ ಮಂಗಳವಾರ ಮಧ್ಯಾಹ್ನ ಕೊನೆಯುಸಿರೆಳೆದರು. ಅವರಿಗೆ ಪುತ್ರ, ಸಹಾಯಕ ಅಡ್ವೋಕೇಟ್ ಜನರಲ್ ಎ.ಎಸ್.ಪೊನ್ನಣ್ಣ ಸೇರಿ ಐವರು ಪುತ್ರರಿದ್ದಾರೆ.

ಕೊಡಗು ಜಿಲ್ಲೆ ವಿರಾಜಪೇಟೆ ತಾಲೂಕಿನ ಹುದಿಕೇರಿ ಗ್ರಾಮದ ಸುಬ್ಬಯ್ಯ ಒಂದು ಕಾಲದಲ್ಲಿ ಬಿಜೆಪಿಯ ಅಧ್ಯಕ್ಷರಾಗಿದ್ದರು. ಇವರನ್ನು ಪ್ರಖರ ವಿಚಾರವಾದಿ ಎಂದೇ ಕರೆಯಲಾಗುತ್ತಿತ್ತು. ಪಾರ್ಥಿವ ಶರೀರವನ್ನು ಮಂಗಳವಾರ ಸಂಜೆ ಆರ್.ಟಿ.ನಗರದಲ್ಲಿರುವ ಸ್ವಗೃಹದಲ್ಲಿ ಸಾರ್ವಜನಿಕ ದರ್ಶನಕ್ಕೆ ಇಡಲಾಗಿತ್ತು. ಬುಧವಾರ ಬೆಳಗ್ಗೆ ಕೊಡಗಿನಲ್ಲಿರುವ ಕಾಫಿ ಎಸ್ಟೇಟ್‌ಗೆ ಕೊಂಡೊಯ್ದು ಅಂತ್ಯ ಸಂಸ್ಕಾರ ನೆರವೇರಿಸಲಾಗುವುದು ಎಂದು ಕುಟುಂಬ ಮೂಲಗಳು ತಿಳಿಸಿವೆ.

6